ಸಂಚಾರ ವ್ಯವಸ್ಥೆಯನ್ನು ಈಗಾಗಲೇ ಜಾರಿ ಮಾಡಲಾಗಿದೆ. ಹಾಗೂ ಗೋಣಿಕೊಪ್ಪದಲ್ಲಿ ರಸ್ತೆಯನ್ನು ಅಗಲ ಮಾಡಲು ಕ್ರಮ ತೆಗೆದುಕೊಳ್ಳುವುದರೊಂದಿಗೆ ಏಕ ಮುಖ ಸಂಚಾರ ವ್ಯವಸ್ಥೆಗೆ ಸೂಕ್ತ ವಿರ್ಪಾಡು ಮಾಡಲಾಗಿದೆ.

ಇ) ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ವಿಷಯ :- ವಿರಾಜಪೇಟೆ ವಿಭಾಗದಲ್ಲಿ ಸುವಿಹಾರಿ ಬಸ್ಸುಗಳನ್ನು ಓಡಿಸಲು ಮನವಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2278 (3021)

ಶ್ರೀ ಹೆಚ್. ಡಿ. ಬಸವರಾಜ್ (ವಿರಾಜಪೇಟೆ) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ವಿರಾಜಪೇಟೆ ವಿಭಾಗದಲ್ಲಿ ಸಂಚರಿಸುವ ಕೆ.ಎಸ್.ಆರ್.ಟಿ.ಸಿ ಬಸ್ಸುಗಳು ವೇಳಾ ಪಟ್ಟಿಯ ಪ್ರಕಾರ ಸಂಚರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಇದರಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಆದಾಯ ಹೆಚ್ಚು ತರುವ ಈ ವಿಭಾಗದಲ್ಲಿ ಬೆಂಗಳೂರಿನಿಂದ ವೀರಾಜಪೇಟೆಗೆ ಮತ್ತು ವೀರಾಜಪೇಟೆಯಿಂದ ಬೆಂಗಳೂರಿಗೆ ಪ್ರತಿ ರಾತ್ರಿ ಸುವಿಹಾರಿ ಬಸ್ಸನ್ನು ಓಡಿಸುವ ಬಗ್ಗೆ ಸಾರ್ವಜನಿಕರ ಅಪೇಕ್ಷೆಯನ್ನು ಪರಿಗಣಿಸಿ ಎಂದಿನಿಂದ ಮೇಲಿನ ವಿರ್ಪಾಡು ಮಾಡಲಾಗುವುದು?

ಶ್ರೀ ಕೆ. ಎಸ್. ಬೀಳಿಗಿ (ಸಾರಿಗೆ ಮಂತ್ರಿಗಳು) :-

ಅ) ಅನಿವಾರ್ಯ ಕಾರಣಗಳಿಂದ ಕೆಲವು ಬಸ್ಸುಗಳನ್ನು ತಡವಾಗಿ ಕಾರ್ಯಾಚರಣೆ ಮಾಡಲಾಗಿದೆ.

ಆ) ವೇಳಾಪಟ್ಟಿಗೆ ಅನುಗುಣವಾಗಿ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.

ಇ) ಪ್ರಸ್ತುತ ಮುಂಗಾರು ಮುಗಿದ ನಂತರ ಈ ವಿಷಯವನ್ನು ಪರಿಶೀಲಿಸಲಾಗುವುದು.

ವಿಷಯ :- ಕ. ರಾ. ರ. ಸಾರಿಗೆ ಸಂಸ್ಥೆಯಲ್ಲಿನ ನೇಮಕಾತಿ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2279 (2952)

ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಸಿಬ್ಬಂದಿ ಮೇಲ್ವಿಚಾರಕರು,